**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ., ಕನಕಪುರ ರವರ ನ್ಯಾಯಾಲಯದಲ್ಲಿ**

# CC No.1690/2022

| | |
|---|---|
| ಸಾಕ್ಷಿದಾರರ ಹೆಸರು | ನಾಗಲಿಂಗೇಗೌಡ |
| ತಂದೆಯ ಹೆಸರು | ನಾಗಲಿಂಗೇಗೌಡ |
| ವಯಸ್ಸು | 32 ವರ್ಷ |
| ವೃತ್ತಿ | ವ್ಯವಸಾಯ |
| ವಿಳಾಸ | ಅನಮಾನಹಳ್ಳಿ ಗ್ರಾಮ |
| ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ | 05.06.2026 |

**ಮುಖ್ಯ ವಿಚಾರಣೆ ಎ ಪಿ ಪಿ ರವರಿಂದಃ-**

ಆರೋಪಿಯನ್ನು ನೋಡಿರುವುದಿಲ್ಲ. ಚಾಸಾ-1 ರವರು ನನಗೆ ಗೊತ್ತಿಲ್ಲ. ಚಾಸಾ-3 ರಿಂದ 11 ರವರು ನನಗೆ ಗೊತ್ತಿರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಮಾಹಿತಿ ಇರುವುದಿಲ್ಲ. ಈ ಮೂರು ವರ್ಷ ಗಳ ಹಿಂದೆ ಠಾಣೆಗೆ ಬೇರೊಂದು ಕೆಲಸಕ್ಕೆ ಹೋಗಿದ್ದಾಗ ನನ್ನ ಒಂದು ಸಹಿ ಪಡೆದಿರುತ್ತಾರೆ. ಅದು ಯಾವ ಕಾರಣಕ್ಕೆ ಎಂದು ನನಗೆ ಗೊತ್ತಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ, ಸಾಕ್ಷಿಯು ಕೇವಲ ತನ್ನ ಸಹಿಯನ್ನು ಮಾತ್ರ ನೋಡಿ ಗುರುತಿಸಿದ್ದು, ಅದು ಸ್ಥಳ ಪಂಚನಾಮೆಯಾಗಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ಈಗ ನಿಪಿ-2(ಬಿ) ಎಂದು ಗುರುತಿಸಲಾಯಿತು.

ನಾನು ಪೊಲೀಸರಿಗೆ ಯಾವುದೇ ಹೇಳಿಕೆ ಕೊಟ್ಟಿಲ್ಲ.

**(ಈ ಹಂತದಲ್ಲಿ ಸಾಕ್ಷಿದಾರ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸ.ಸ ಅ ರವರು ಸಾಕ್ಷಿಯನ್ನು ವಾಟೀ ಸವಾಲನ್ನು ಮಾಡಲು ಅನುಮತಿ ನೀಡಲು ಕೋರಿದ ಮೇರೆಗೆ ಅನುಮತಿ ನೀಡಲಾಯಿತು).**

**ವಾಟೀ ಸವಾಲುಃ ಸ. ಸ. ಅ. ರವರಿಂದ**

ದಿನಾಂಕ 20.03.2022 ರಂದು ಕನಕಪುರ ಟೌನ್, ಬಸವೇಶ್ವರ ನಗರ, ಮಹಾರಾಜರಕಟ್ಟೆ ಮುಖ್ಯರಸ್ತೆಯಲ್ಲಿ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನನ್ನ ಹಾಗೂ ಚಾಸಾ-3 ರವರ ಸಮಕ್ಷಮ ಪೊಲೀಸರು ಸಂಜೆ 4.45 ಗಂಟೆಯಿಂದ 5.30ಗಂಟೆಯ ವರೆಗೂ ಈಗ ಓದಿ ಹೇಳಿದಂತೆ ಮಹಜರ್ ಮಾಡಿ ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಅದೇ ರೀತಿ ದಿನಾಂಕ 23.03.2022 ರಂದು ಈಗ ಸವಿಸ್ತಾರವಾಗಿ ಓದಿ ಹೇಳಿದಂತೆ ಹೇಳಿಕೆಯನ್ನು ಕೊಟ್ಟಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯ ದಾಖಲೆಯನ್ನು ನಿಪಿ-5 ಎಂದು ಗುರುತಿಸಲಾಯಿತು. ಸಾಕ್ಷಿಗೆ ಈಗ ಒಂದು ಫೋಟೋವನ್ನು ತೋರಿಸಲಾಗಿ ಅದರಲ್ಲಿ ತಾನು ಹಾಜರು ಇರುವುದಾಗಿ ತಿಳಿಸಿದ್ದು, ಸದರಿ ಫೋಟೋ ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿರುತ್ತದೆ. ನನಗೆ ಈ ಪ್ರಕರಣದ ಎಲ್ಲಾ ಮಾಹಿತಿ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿ ಪರ ವಕೀಲರಿಂದ**

ನಾನು ಮನೆಗೆ ಹೋಗುತ್ತಿದ್ದ ಸಂದರ್ಭದಲ್ಲಿ ಪೊಲೀಸರು ತಮ್ಮ ಜೊತೆ ನಿಪಿ-3ರಂತೆ ಫೋಟೋ ತೆಗೆದುಕೊಂಡಿದ್ದರು ಎಂದರೆ ಸರಿ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ ಎಂದರೆ ಸರಿ.

CW.2 PW.2

**ಮರುವಿಚಾರಣೆಃ ಇರುವುದಿಲ್ಲ**

**ಓ ಹೇ ಕೇ ಸರಿ ಇದೆ**

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,**

**ಕನಕಪುರ .**